Akashvani: Bangalore
National Bulletin In Kannada
28.02.2026 : 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

28.02.2026 : 7.35AM

********

**ಮುಖ್ಯಾಂಶಗಳು**

1. ರಾಜಸ್ತಾನದಲ್ಲಿಂದು ರಾಷ್ಟ್ರವ್ಯಾಪಿ ಎಚ್‌ಪಿವಿ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಿರುವ ಪ್ರಧಾನಿ ನರೇಂದ್ರ ಮೋದಿ
2. ಪ್ರಧಾನಿ ಗುಜರಾತ್ ಭೇಟಿ; ಸಾನಂದ್‌ನಲ್ಲಿ ಅತ್ಯಾಧುನಿಕ ಸೆಮಿಕಂಡಕ್ಟರ್ ಘಟಕ ಉದ್ಘಾಟನೆ
3. ಭಾರತ - ನೇಪಾಳ ಗಡಿ ಭದ್ರತಾ ಸವಾಲುಗಳ ಕುರಿತು ಕೇಂದ್ರ ಸಚಿವ ಅಮಿತ್ ಶಾ ಉನ್ನತ ಮಟ್ಟದ ಪರಿಶೀಲನಾ ಸಭೆ
4. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್; ಗುಂಪು-೨ರ ಪಂದ್ಯದಲ್ಲಿ ನ್ಯೂಜಿಲ್ಯಾಂಡ್ ವಿರುದ್ಧ ಇಂಗ್ಲೆಂಡ್‌ಗೆ ೪ ವಿಕೆಟ್‌ಗಳ ಜಯ

*********

ಪ್ರಧಾನಿ ನರೇಂದ್ರ ಮೋದಿ ಅವರಿಂದು ರಾಜಸ್ಥಾನದ ಅಜ್ಮೀರ್‌ನಲ್ಲಿ ೧೪ ವರ್ಷ ವಯಸ್ಸಿನ ಬಾಲಕಿಯರಿಗಾಗಿ ರಾಷ್ಟ್ರವ್ಯಾಪಿ ಹ್ಯೂಮನ್ ಪ್ಯಾಪಿಲೋಮಾವೈರಸ್ ಎಚ್‌ಪಿವಿ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ. ಈ ಲಸಿಕಾ ಅಭಿಯಾನ ದೇಶದ ಸಾರ್ವಜನಿಕ ಆರೋಗ್ಯ ಪಯಣದಲ್ಲಿ ನಿರ್ಣಾಯಕ ಹೆಜ್ಜೆಯಾಗಿದ್ದು, ಮಹಿಳಾ ಆರೋಗ್ಯ ರಕ್ಷಣೆಯಲ್ಲಿ ತಡೆಗಟ್ಟುವಿಕೆ ಮತ್ತು ರಕ್ಷಣೆ ಖಚಿತಪಡಿಸಿಕೊಳ್ಳುವ, ಸ್ವಸ್ಥ ನಾರಿಯ ದೃಷ್ಟಿಕೋನವನ್ನು ಮುನ್ನಡೆಸುವ ಸರ್ಕಾರದ ಬದ್ಧತೆಯನ್ನು ಪೂರೈಸುತ್ತದೆ. ಈ ಕಾರ್ಯಕ್ರಮ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಪ್ರತಿ ವರ್ಷ ೧೪ ವರ್ಷ ವಯಸ್ಸಿನ ಸುಮಾರು ೧.೧೫ ಕೋಟಿ ಬಾಲಕಿಯರಿಗೆ ಪ್ರಯೋಜನಕಾರಿಯಾಗಲು ರೂಪಿಸಲಾಗಿದೆ. ಲಸಿಕೆಯನ್ನು ನಿರ್ದಿಷ್ಟ ಸರ್ಕಾರಿ ಆರೋಗ್ಯ ಸೌಲಭ್ಯಗಳಲ್ಲಿ ಉಚಿತವಾಗಿ ನೀಡಲಾಗುತ್ತದೆ. ಆಯುಷ್ಮಾನ್ ಆರೋಗ್ಯ ಮಂದಿರಗಳು, ಸಮುದಾಯ ಆರೋಗ್ಯ ಕೇಂದ್ರಗಳು, ಉಪ-ಜಿಲ್ಲಾ ಮತ್ತು ಜಿಲ್ಲಾ ಆಸ್ಪತ್ರೆಗಳು ಹಾಗೂ ಸರ್ಕಾರಿ ವೈದ್ಯಕೀಯ ಕಾಲೇಜುಗಳು ಮತ್ತು ಆಸ್ಪತ್ರೆಗಳಲ್ಲಿ ಲಸಿಕೆಯನ್ನು ನೀಡಲಾಗುತ್ತದೆ. ಲಸಿಕೆ

ಪಡೆಯುವುದು ಸಂಪೂರ್ಣ ಸ್ವಯಂಪ್ರೇರಿತವಾಗಿದ್ದು, ಅದರ ನೀಡುವಿಕೆಗೂ ಮುನ್ನ ಪೋಷಕರಿಂದ ಒಪ್ಪಿಗೆಯನ್ನು ಪಡೆಯಲಾಗುತ್ತದೆ. ಗರ್ಭಕಂಠದ ಕ್ಯಾನ್ಸರ್ ದೇಶದಲ್ಲಿ ಮಹಿಳೆಯರಲ್ಲಿ ಎರಡನೇ ಅತ್ಯಂತ ಸಾಮಾನ್ಯವಾಗಿ ಕಾಣಿಸಿಕೊಳ್ಳುವ ಕ್ಯಾನ್ಸರ್ ಆಗಿದೆ, ಗ್ಲೋಬೊಕ್ಯಾನ್ ೨೦೨೨ರ ದತ್ತಾಂಶದ ಪ್ರಕಾರ ವಾರ್ಷಿಕವಾಗಿ ೧ ಲಕ್ಷ ೨೦ ಸಾವಿರಕ್ಕೂ ಹೆಚ್ಚು ಹೊಸ ಪ್ರಕರಣಗಳು ಮತ್ತು ಸುಮಾರು ೮೦ ಸಾವಿರ ಸಾವುಗಳು ಸಂಭವಿಸುತ್ತಿವೆ. ಲಸಿಕೆ ಮತ್ತು ಆರಂಭಿಕ ತಪಾಸಣೆಯ ಮೂಲಕ ಹೆಚ್ಚಾಗಿ ತಡೆಗಟ್ಟಬಹುದಾದರೂ, ಗರ್ಭಕಂಠದ ಕ್ಯಾನ್ಸರ್ ಚಿಕಿತ್ಸೆ ಕುಟುಂಬಗಳು ಮತ್ತು ಆರೋಗ್ಯ ವ್ಯವಸ್ಥೆಯ ಮೇಲೆ ಭಾರೀ ಹೊರೆಯಾಗಿದೆ. ರಾಷ್ಟ್ರವ್ಯಾಪಿ ಈ ಲಸಿಕಾ ಕಾರ್ಯಕ್ರಮವು ಎಚ್‌ಪಿವಿ  ಸೋಂಕು ಕ್ಯಾನ್ಸರ್‌ಆಗಿ ಪರಿವರ್ತಿತವಾಗುವ ಮೊದಲು ತಡೆಗಟ್ಟುವ ಮೂಲಕ ಈ ಸವಾಲನ್ನು ಪರಿಹರಿಸುತ್ತದೆ.

*********

ದೇಶಾದ್ಯಂತ ೧೪ ವರ್ಷ ವಯಸ್ಸಿನ ಬಾಲಕಿಯರಿಗೆ ಉಚಿತ ಎಚ್‌ಪಿವಿ ಲಸಿಕೆ ಒದಗಿಸುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಭಾರತೀಯ ವೈದ್ಯಕೀಯ ಸಂಸ್ಥೆ - ಐಎಂಎ ಶ್ಲಾಘಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರಿಗೆ ಬರೆದಿರುವ ಪತ್ರದಲ್ಲಿ ಐಎಂಎ, ಈ ಉಪಕ್ರಮ ಗರ್ಭಕಂಠ ಕ್ಯಾನ್ಸರ್ ತಡೆಗಟ್ಟಲು ಸಹಕರಿಸಲಿದೆ. ಆ ಮೂಲಕ ಲಕ್ಷಾಂತರ ಮಹಿಳೆಯರ ಆರೋಗ್ಯ ಮತ್ತು ಜೀವನವನ್ನು ರಕ್ಷಿಸಲಿದೆ. ದೇಶಾದ್ಯಂತ ಒಂದು ಸಾವಿರದ ೮೦೦ಕ್ಕೂ ಅಧಿಕ ಸ್ಥಳೀಯ ಕೇಂದ್ರಗಳನ್ನು ಹೊಂದಿರುವ ಐಎಂಎ, ಈ ರಾಷ್ಟ್ರೀಯ ಉಪಕ್ರಮಕ್ಕೆ ಸಂಪೂರ್ಣ ಬೆಂಬಲ ನೀಡಲು ಬದ್ಧವಾಗಿರುತ್ತದೆ ಎಂದು ತಿಳಿಸಿದೆ.

*********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಮಧ್ಯಾಹ್ನ ಗುಜರಾತ್‌ಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಅವರು, ಸಾನಂದ್‌ನಲ್ಲಿ ಮೈಕ್ರಾನ್ ಟೆಕ್ನಾಲಜಿಯ ಅತ್ಯಾಧುನಿಕ ಸೆಮಿಕಂಡಕ್ಟರ್ ಜೋಡಣೆ ಪರೀಕ್ಷೆ ಮತ್ತು ಪ್ಯಾಕೇಜಿಂಗ್ ಘಟಕವನ್ನು ಉದ್ಘಾಟಿಸಲಿದ್ದಾರೆ. ಆ ಮೂಲಕ ಭಾರತದಲ್ಲೇ ತಯಾರಿಸಲಾದ ಮೊದಲ ಸೆಮಿಕಂಡಕ್ಟರ್ ಮೆಮೊರಿ ಮಾಡ್ಯೂಲ್‌ಗಳ ವಾಣಿಜ್ಯ ಉತ್ಪಾದನೆ ಮತ್ತು ಅಧಿಕೃತ ಸಾಗಣೆಗೆ ಚಾಲನೆ ದೊರೆಯಲಿದೆ. ಈ ಸಂದರ್ಭದಲ್ಲಿ ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಉಪಸ್ಥಿತರಿರಲಿದ್ದಾರೆ. ಒಟ್ಟು ೨೨ ಸಾವಿರದ ೫೦೦ ಕೋಟಿ ರೂಪಾಯಿಗೂ ಅಧಿಕ ಹೂಡಿಕೆಯೊಂದಿಗೆ ನಿರ್ಮಾಣವಾಗಿರುವ ಈ

ಸೌಲಭ್ಯ ಭಾರತ ಸೆಮಿಕಂಡಕ್ಟರ್ ಮಿಷನ್ ಅಡಿಯಲ್ಲಿ ಅನುಮೋದನೆ ಪಡೆದ ಮೊದಲ ಪ್ರಸ್ತಾವನೆಯಾಗಿದೆ.

*********

ಬಿಹಾರದಲ್ಲಿ ನಿನ್ನೆ ಕೇಂದ್ರ ಗೃಹ ಸಚಿವ ಅಮಿತ್ ಶಾ, ಭಾರತ - ನೇಪಾಳ ಗಡಿ ಭಾಗದ ಜಿಲ್ಲೆಗಳಲ್ಲಿನ ಭದ್ರತಾ ಸವಾಲುಗಳ ಕುರಿತು ಉನ್ನತ ಮಟ್ಟದ ಪರಿಶೀಲನಾ ಸಭೆ ನಡೆಸಿದರು. ಗಡಿ ನಿರ್ವಹಣೆಯನ್ನು ಬಲಪಡಿಸುವ ಮತ್ತು ಅಕ್ರಮ ಚಟುವಟಿಕೆಗಳ ವಿರುದ್ಧ ನಿರಂತರ ನಿಗಾ ಇಡುವ ಅಗತ್ಯವನ್ನು ಸಭೆಯಲ್ಲಿ ಒತ್ತಿ ಹೇಳಲಾಯಿತು. ಗಡಿ ಪ್ರದೇಶಗಳಲ್ಲಿ ಅಕ್ರಮ ಮೂಲಸೌಕರ್ಯ ನಿರ್ಮಾಣ, ಅಕ್ರಮ ವಲಸೆ, ನಕಲಿ ಭಾರತೀಯ ನೋಟುಗಳ ಚಲಾವಣೆ, ಒತ್ತುವರಿ ಮತ್ತು ಅನಧಿಕೃತ ಹಣಕಾಸು ಹರಿವಿನಂತಹ ಗಂಭೀರ ಸವಾಲುಗಳನ್ನು ಎದುರಿಸಲು ವಿವಿಧ ಸಂಸ್ಥೆಗಳ ನಡುವೆ ಸಮನ್ವಯಕ್ಕಾಗಿ ಕ್ರಮ ಕೈಗೊಳ್ಳಲು ಸಭೆಯಲ್ಲಿ ನಿರ್ಧರಿಸಲಾಯಿತು.

*********

ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಪಶ್ಚಿಮ ಬಂಗಾಳದ ಅಂತಿಮ ಮತದಾರರ ಪಟ್ಟಿಯನ್ನು ಕೇಂದ್ರ ಚುನಾವಣಾ ಆಯೋಗ ಇಂದು ಪ್ರಕಟಿಸಲಿದೆ. ವಿಶೇಷ ತೀವ್ರ ಪರಿಷ್ಕರಣಾ ಪ್ರಕ್ರಿಯೆಯ ಮೂಲಕ ನ್ಯಾಯಾಂಗದಿಂದ ದೃಢೀಕರಿಸಲ್ಪಟ್ಟ ಮತದಾರರ ಹೆಸರುಗಳು ಈ ಪಟ್ಟಿಯಲ್ಲಿ ಸೇರಿವೆ. ಒಟ್ಟು ೭ ಕೋಟಿ ೮ ಲಕ್ಷ ಮತದಾರರ ಹೆಸರುಗಳನ್ನು ಒಳಗೊಂಡಿರುವ ಈ ಪಟ್ಟಿಯನ್ನು ವಿವಿಧ ವರ್ಗಗಳ ಆಧಾರದ ಮೇಲೆ ವಿಂಗಡಿಸಿ, ಅಧಿಕೃತಗೊಳಿಸಲಾಗುವುದು.

*********

ದೆಹಲಿಯ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಭ್ರಷ್ಟಾಚಾರ ಪ್ರಕರಣದಲ್ಲಿ ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್, ನಾಯಕ ಮನೀಶ್ ಸಿಸೋಡಿಯಾ ಮತ್ತು ಇತರರನ್ನು ಖುಲಾಸೆಗೊಳಿಸಿರುವ ವಿಚಾರಣಾ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ, ಕೇಂದ್ರೀಯ ತನಿಖಾ ದಳ - ಸಿಬಿಐ ದೆಹಲಿ ಉಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿದೆ. ವಿಚಾರಣಾ ನ್ಯಾಯಾಲಯ ತೀರ್ಪು ನೀಡಿದ ಕೆಲವೇ ಗಂಟೆಗಳಲ್ಲಿ ಸಿಬಿಐ ಈ ಕ್ರಮ ಕೈಗೊಂಡಿದೆ. ವಿಚಾರಣಾ ನ್ಯಾಯಾಲಯ, ಅರವಿಂದ್ ಕೇಜ್ರಿವಾಲ್, ಮನೀಶ್ ಸಿಸೋಡಿಯಾ ಮತ್ತು ಕೆ. ಕವಿತಾ ಸೇರಿದಂತೆ ಪ್ರಕರಣದ ಎಲ್ಲಾ ೨೩ ಆರೋಪಿಗಳನ್ನು ಖುಲಾಸೆಗೊಳಿಸಿ ಆದೇಶಿಸಿತ್ತು, ಈ ಕುರಿತು ವಾದಿಸಿರುವ ಸಿಬಿಐ, ತನಿಖೆ ಹಲವು ಪ್ರಮುಖ ಅಂಶಗಳನ್ನು ವಿಚಾರಣಾ ನ್ಯಾಯಾಲಯ

ನಿರ್ಲಕ್ಷಿಸಿದೆ ಹಾಗೂ ಸಲ್ಲಿಸಲಾದ ಸಾಕ್ಷ್ಯಾಧಾರಗಳು ಮತ್ತು ದಾಖಲೆಗಳನ್ನು ಸಮರ್ಪಕವಾಗಿ ಪರಿಗಣಿಸಿಲ್ಲ ಎಂದು ತಿಳಿಸಿದೆ.

*********

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಇಂದಿನಿಂದ ಎರಡು ದಿನಗಳ ಕಾಲ ಕೇರಳ ಪ್ರವಾಸ ಕೈಗೊಳ್ಳಲಿದ್ದಾರೆ. ಪ್ರವಾಸದ ಮೊದಲನೇ ದಿನವಾದ ಇಂದು ಉಪರಾಷ್ಟ್ರಪತಿ, ಚಂಗನಸೆರಿಯ ಸೇಂಟ್ ಬೆರ್ಚ್‌ಮಾನ್ಸ್ ಕಾಲೇಜಿನ ಶತಮಾನೋತ್ಸವ ಸಂಭ್ರಮಾಚರಣೆಯ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ನಾಳೆ ಅವರು, ತ್ರಿಶೂರ್‌ನ ದೇವಮಾತಾ ಸಿಎಂಐ ಪಬ್ಲಿಕ್ ಶಾಲೆಯಲ್ಲಿ ಚೇತನ ಗಾನಾಶ್ರಮಕ್ಕೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದರ ಜೊತೆಗೆ ಉಪರಾಷ್ಟ್ರಪತಿ, ತಿರುವನಂತಪುರಂನಲ್ಲಿ ಸೇಂಟ್ ಸ್ಟೀಫನ್ಸ್ ಪ್ರೌಢಶಾಲೆಯ ಶತಮಾನೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

*********

ಪಾಕಿಸ್ತಾನದೊಂದಿಗೆ ಸದ್ಯ ಉದ್ಭವಿಸಿರುವ ಸಂಘರ್ಷದ ಪರಿಸ್ಥಿತಿಯನ್ನು ಮಾತುಕತೆ ಮತ್ತು ರಾಜತಾಂತ್ರಿಕ ಮಾರ್ಗಗಳ ಮೂಲಕ ಬಗೆಹರಿಸಿಕೊಳ್ಳಲು ಬಯಸುತ್ತಿರುವುದಾಗಿ ಅಫ್ಘಾನಿಸ್ತಾನ ತಿಳಿಸಿದೆ. ಅಫ್ಘಾನಿಸ್ತಾನ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಾಕಿ, ಸೌದಿ ಅರೆಬಿಯಾ, ಕತಾರ್ ಮತ್ತು ಟರ್ಕಿ ದೇಶಗಳ ವಿದೇಶಾಂಗ ಸಚಿವರೊಂದಿಗೆ ದೂರವಾಣಿ ಮೂಲಕ ಮಾತುಕತೆ ನಡೆಸಿ, ಪ್ರಚಲಿತ ಬೆಳವಣಿಗೆಗಳ ಕುರಿತು ಚರ್ಚಿಸಿದ್ದಾರೆ.

*********

ಬೊಲಿವಿಯಾ ರಾಜಧಾನಿ ಸಮೀಪ ಹಣವನ್ನು ಹೊತ್ತೊಯ್ಯುತ್ತಿದ್ದು, ಸರಕು ಸಾಗಾಣೆ ವಿಮಾನವೊಂದು ನಿನ್ನೆ ಪತನಗೊಂಡಿದ್ದು, ಕನಿಷ್ಠ ೧೫ ಮಂದಿ ಮೃತಪಟ್ಟಿದ್ದಾರೆ. ಲಾ ಪಾಸ್ ವಿಮಾನ ನಿಲ್ದಾಣ ಸಮೀಪದ ಹೆದ್ದಾರಿಯಲ್ಲಿ ಈ ದುರಂತ ಸಂಭವಿಸಿದೆ. ಅಗ್ನಿಶಾಮಕ ದಳದ ಮುಖ್ಯಸ್ಥ ಪಾವೆಲ್ ತೋವರ್ ಘಟನೆ ಬಗ್ಗೆ ಮಾಹಿತಿ ನೀಡಿದ್ದು, ಮೃತಪಟ್ಟವರು ವಿಮಾನದಲ್ಲಿದ್ದವರೇ ಅಥವ ಹೆದ್ದಾರಿಯಲ್ಲಿದ್ದ ವಾಹನಗಳಲ್ಲಿದ್ದವರೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ ಎಂದು ತಿಳಿಸಿದ್ದಾರೆ. ಅಪಘಾತದಲ್ಲಿ ಹಲವರು ಗಾಯಗೊಂಡಿದ್ದು, ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ.

*********

ಕೃತಕ ಬುದ್ಧಿಮತ್ತೆ ಅಭಿವೃದ್ಧಿಪಡಿಸುವ ಪ್ರಮುಖ ಸಂಸ್ಥೆಯಾದ ಆಂಥ್ರೋಪಿಕ್ ಕಂಪನಿಯ ತಂತ್ರಜ್ಞಾನ ಬಳಕೆಯನ್ನು ತಕ್ಷಣವೇ ಸ್ಥಗಿತಗೊಳಿಸುವಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಎಲ್ಲಾ ಸರ್ಕಾರಿ ಸಂಸ್ಥೆಗಳಿಗೆ ಆದೇಶಿಸಿದ್ದಾರೆ. ಸಾಮಾಜಿಕ ಜಾಲತಾಣದ ಸಂದೇಶದಲ್ಲಿ ಅಧ್ಯಕ್ಷ ಟ್ರಂಪ್, ಈ ತಂತ್ರಜ್ಞಾನ ಸಂಸ್ಥೆಯೊಂದಿಗೆ ತಾವು ವ್ಯವಹಾರ ನಡೆಸುವುದಿಲ್ಲ ಎಂದು ತಿಳಿಸಿದ್ದಾರೆ.

*********

ಕೊಲಂಬೋದ ಆರ್. ಪ್ರೇಮದಾಸ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಸೂಪರ್ ೮ರ ಹಂತದ ಗುಂಪು-೨ರ ಪಂದ್ಯದಲ್ಲಿ ನ್ಯೂಜಿಲ್ಯಾಂಡ್ ತಂಡವನ್ನು ಇಂಗ್ಲೆಂಡ್ ತಂಡ ೪ ವಿಕೆಟ್‌ಗಳಿಂದ ಪರಾಭವಗೊಳಿಸಿದೆ. ನ್ಯೂಜಿಲ್ಯಾಂಡ್ ನೀಡಿದ ೧೬೦ ರನ್‌ಗಳ ಗುರಿ ಬೆನ್ನತ್ತಿದ ಇಂಗ್ಲೆಂಡ್, ೧೯.೩ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೬೧ ರನ್ ಗಳಿಸಿ, ಸೆಮಿಫೈನಲ್‌ನಲ್ಲಿ ತನ್ನ ಸ್ಥಾನ ಭದ್ರಪಡಿಸಿಕೊಂಡಿದೆ. ಇಂದು ಪಲ್ಲೆಕೆಲೆ ಕ್ರೀಡಾಂಗಣದಲ್ಲಿ ನಡೆಯಲಿರುವ ಗುಂಪು-೧ರ ಪಂದ್ಯದಲ್ಲಿ ಶ್ರೀಲಂಕಾ ಹಾಗೂ ಪಾಕಿಸ್ತಾನ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭ ಗಂಟೆಗೆ ಆರಂಭವಾಗಲಿದೆ.

*********

ಕರ್ನಾಟಕದ ಹುಬ್ಬಳ್ಳಿಯಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಫೈನಲ್ ಪಂದ್ಯದ ೫ನೇ ದಿನದಾಟದಲ್ಲಿಂದು ಕರ್ನಾಟಕ ವಿರುದ್ಧ ಜಮ್ಮು-ಕಾಶ್ಮೀರ ತನ್ನ ಎರಡನೇ ಇನ್ನಿಂಗ್ಸ್ ಅನ್ನು ಮುಂದುವರಿಸಲಿದೆ. ಎರಡನೇ ಇನ್ನಿಂಗ್ಸ್‌ನಲ್ಲಿ ನಾಲ್ಕನೇ ದಿನದಾಟದ ಅಂತ್ಯಕ್ಕೆ ನಿನ್ನೆ ಜಮ್ಮು-ಕಾಶ್ಮೀರ ೪ ವಿಕೆಟ್ ನಷ್ಟಕ್ಕೆ ೧೮೬ ರನ್ ಗಳಿಸಿದೆ. ಪ್ರಸ್ತುತ ಜಮ್ಮು-ಕಾಶ್ಮೀರ ೪೭೭ ರನ್‌ಗಳ ಮುನ್ನಡೆಯಲ್ಲಿದೆ. ಇಂದಿನ ದಿನದಾಟ ೯.೩೦ಕ್ಕೆ ಆರಂಭವಾಗಲಿದೆ. ಮೊದಲ ಇನ್ನಿಂಗ್ಸ್‌ನಲ್ಲಿ ಜಮ್ಮು-ಕಾಶ್ಮೀರ ೫೮೪ ರನ್ ಗಳಿಸಿದ್ದು, ಕರ್ನಾಟಕ ೨೯೩ ರನ್ ಗಳಿಸಿದೆ.

*****END****